## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಭಾಗ್ಯ ಯೋಜನೆಯಡಿ 2017–18ನೇ ಸಾಲಿಗೆ ಹೊಸ ಜಿಲ್ಲೆ ಹಾಗೂ ತಾಲ್ಲೂಕುಗಳನ್ನು ಸೇರ್ಪಡೆ ಮಾಡುವ ಬಗ್ಗೆ

ಓದಲಾಗಿದೆ: 1. 2017–18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ–21
2. ಆರ್ಥಿಕ ಇಲಾಖೆಯ ಅ.ಟಿ. ಸಂಖ್ಯೆ:ಆಇ 269 ವೆಚ್ಚ–4/2012. ದಿ:01–04–2017
3. ಆಯುಕ್ತರು, ಕೃಷಿ ಇಲಾಖೆರವರ ಪತ್ರ ಸಂಖ್ಯೆ:ಉಕೃನಿ/ಕೃಷಿ ಭಾಗ್ಯ/ Vol-2/2015-16, ದಿ:31-3-2017

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ (1) ರಲ್ಲಿ 2017–18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ–21ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

"ಕೃಷಿ ಭಾಗ್ಯ ಯೋಜನೆಯು ರಾಜ್ಯ ಸಂಧಿಗ್ದ ಪರಿಸ್ಥಿತಿಯಲ್ಲಿ ಬೆಳೆಗಳಿಗೆ ಸಂರಕ್ಷಣಾತ್ಮಕ ನೀರಾವರಿ ಒದಗಿಸುವ ಮೂಲಕ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಮತ್ತು ಹೆಚ್ಚು ಪಡೆಯುವಲ್ಲಿ ಮಹತ್ವದ ಪಾತ್ರವಹಿಸಿದೆ. ಈ ಯೋಜನೆಯ ಯಶಸ್ಸು ಗಮನಿಸಿ, 2017–18ನೇ ಸಾಲಿನಲ್ಲಿ ಈ ಯೋಜನೆಯನ್ನು ಕರಾವಳಿ ಮತ್ತು ಮಲೆನಾಡು ಪ್ರದೇಶಗಳ (ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿ) ಎಲ್ಲಾ ತಾಲ್ಲೂಕುಗಳಿಗೆ ವಿಸ್ತರಿಸಲಾಗುವುದು. ಇದಕ್ಕಾಗಿ ರೂ.600.00 ಕೋಟಿಗಳ ಅನುದಾನ ಒದಗಿಸಲಾಗುವುದು"

ಮೇಲೆ ಓದಲಾದ (2) ರ ಅನಧಿಕೃತ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಆಯವ್ಯಯ ಭಾಷಣದ ಕಂಡಿಕೆ–21ರಲ್ಲಿನ ಯೋಜನೆಗೆ 2017–18ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ– 2401–00–102–0–27, ರಡಿಯಲ್ಲಿ ಒದಗಿಸಲಾಗಿರುವ ರೂ.60000.00 ಲಕ್ಷಗಳಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2017–18ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಕರಾವಳಿ ಮತ್ತು ಮಲೆನಾಡು ಪ್ರದೇಶಗಳ (ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿ) ಎಲ್ಲಾ ತಾಲ್ಲೂಕುಗಳಿಗೆ ವಿಸ್ತರಿಸಲಾಗಿದ್ದು, ರೂ.600.00 ಕೋಟಿಗಳ ಅನುದಾನದಲ್ಲಿ 2017–18ನೇ ಸಾಲಿಗೆ ಕೃಷಿ ಭಾಗ್ಯ ಯೋಜನೆಯನ್ನು ರಾಜ್ಯದ 30 ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿಯೂ (ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿ) ವಿಸ್ತರಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ, ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಶವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/78/ಕೃಯೋಕಾ/2017, ಬೆಂಗಳೂರು, ದಿನಾಂಕ:06–05–2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2017–18ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಕರಾವಳಿ ಮತ್ತು ಮಲೆನಾಡು ಪ್ರದೇಶಗಳ (ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿ) ರಾಜ್ಯದ ಎಲ್ಲಾ ತಾಲ್ಲೂಕಗಳಲ್ಲಿಯೂ ವಿಸ್ತರಿಸಲು ಹಾಗೂ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿದೆ.

ಈ ಯೋಜನೆಗೆ ತಗುಲುವ ವೆಚ್ಚವನ್ನು, 2017-18ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ-2401-00-102-0-27 ರಡಿ ಒದಗಿಸಿರುವ ರೂ.600.00 ಕೋಟಿಗಳ (ರೂ.ಆರುನೂರ ಕೋಟಿಗಳು ಮಾತ್ರ) ಅನುದಾನದಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 292 ವೆಚ್ಚ-4/2017, ದಿ:25-04-2017 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 16 ಪಿಎಫ್‌ಓ 2017, ದಿ:20-04-2017 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

16/5/17

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕೃಷಿ ಇಲಾಖೆ (ಯೋಜನೆ).

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರುಗಳಿಗೆ (ಕೃಷಿ ಆಯುಕ್ತರವರ ಮೂಲಕ)
10. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ (ಕೃಷಿ ಆಯುಕ್ತರವರ ಮೂಲಕ)
11. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ.
13. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.
14. ಸರ್ಕಾರದ ಜಂಟಿ ಕಾರ್ಯದರ್ಶಿ ಮತ್ತು ಉಪಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
16. ತಾಂತ್ರಿಕ ಅಧಿಕಾರಿ, ಕೃಷಿ ಇಲಾಖೆ, ಯೋಜನೆ ಎ & ಬಿ ಶಾಖೆ
17. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.